ಖಾಸಗಿ ಕಾಲೇಜು ಸಿಬ್ಬಂದಿಗೆ ಅನುದಾನ

790 (1359) ಶ್ರೀ ಬಿ.ಸಿ.ಪಾಟೀಲ್ (ಹಿರೇಕೆರೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸುವ ಯೋಜನೆ ಸರ್ಕಾರದ ಗಮನದಲ್ಲಿದೆಯೇ;

ಆ) ದೈಹಿಕ ಶಿಕ್ಷಣ ಶಿಕ್ಷಕರು, ಗ್ರಂಥಪಾಲಕರು ಹಾಗೂ ಗ್ರೂಪ್ ಡಿ ಹುದ್ದೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಿರುವ ವಿಚಾರ ಸರ್ಕಾರದ ಗಮನದಲ್ಲಿದೆಯೇ;

ಇ) ಶಾಲಾ ಕಾಲೇಜುಗಳಲ್ಲಿ 40 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು ನೇಮಕ ಮಾಡುವ ನಿಯಮ ದೈಹಿಕ ಶಿಕ್ಷಣ ಶಿಕ್ಷಕರಿಗೆ ಏಕೆ ಅನ್ವಯಿಸುವುದಿಲ್ಲ;

ಈ) ಸುಮಾರು ಕಾಲೇಜುಗಳಲ್ಲಿ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಭ್ಯಸಿಸುತ್ತಿದ್ದು ಇಷ್ಟೊಂದು ವಿದ್ಯಾರ್ಥಿಗಳಿಗೆ ಕೇವಲ ಒಬ್ಬ ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯನಿರ್ವಹಿಸುವುದು ಕಷ್ಟಕರವಾಗಿದ್ದು ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು. ಪ್ರಸ್ತುತ 01-06-1987 ರಿಂದ 1994-95ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಪ್ರಾರಂಭವಾದ ಅರ್ಹ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲಾಗುತ್ತಿದೆ.

ಆ) ಸರ್ಕಾರದ ನೀತಿಯಂತೆ ಪ್ರಸ್ತುತ ಮಾನ್ಯತೆ ಹೊಂದಿದ ಬೋಧಕರು ಮತ್ತು ಒಬ್ಬ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಮಾತ್ರ ಸಹಾಯಾನುದಾನಕ್ಕೆ ಒಳಪಡಿಸಲಾಗುತ್ತಿದ್ದು, ದೈಹಿಕ ಶಿಕ್ಷಕರು, ಗ್ರಂಥಪಾಲಕರು ಮತ್ತು ಗ್ರೂಪ್-ಡಿ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸುತ್ತಿಲ್ಲ.

ಇ) ಸರ್ಕಾರದ ಆದೇಶ ಸಂ.ಇಡಿ 82 ಟಿಪಿಯು 2000 ದಿನಾಂಕ: 27-11-2000 ರಂತೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜು ಗಳಲ್ಲಿ ಪ್ರಥಮ, ದ್ವಿತೀಯ ಪಿ.ಯು. ತರಗತಿಗಳಲ್ಲಿ 240 ವಿದ್ಯಾರ್ಥಿಗಳು

ಇರಬೇಕು ಮತ್ತು ಈ ಪೈಕಿ 120 ವಿದ್ಯಾರ್ಥಿಗಳನ್ನು ದ್ವಿತೀಯ ಪಿ.ಯು ಪರೀಕ್ಷೆಗೆ ಹಾಜರಾಗಿರಬೇಕು. ಇಂತಹ ಪದವಿಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅವಕಾಶವಿದೆ. 40 ವಿದ್ಯಾರ್ಥಿಗಳಿಗೆ ಒಬ್ಬ ದೈಹಿಕ ಶಿಕ್ಷಕ ಹುದ್ದೆಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಈ) ಮೇಲಿನಂತೆ ದೈಹಿಕ ಶಿಕ್ಷಕರ ಹುದ್ದೆಗೆ ಕನಿಷ್ಠ ವಿದ್ಯಾರ್ಥಿಗಳ ಸಂಖ್ಯೆಯನ್ನು 240 ಎಂದು ನಿಗದಿಪಡಿಸಲಾಗಿದ್ದರೂ, 500 ವಿದ್ಯಾರ್ಥಿಗಳು ಇದ್ದಾಗ್ಯೂ, ದೈಹಿಕ ಶಿಕ್ಷಕರ ಒಂದೇ ಹುದ್ದೆಯನ್ನು ಮಂಜೂರು ಮಾಡಲು ಅವಕಾಶವಿರುತ್ತದೆ.

ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ

792 (1361) ಶ್ರೀ ಬಿ.ಸಿ. ಪಾಟೀಲ್ (ಹಿರೇಕೆರೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2008–09ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ;

ಆ) ಹಾಗಿದ್ದಲ್ಲಿ, ಖಾಸಗಿ ಪದವಿ ಪೂರ್ವ ಮಹಾವಿದ್ಯಲಯ ಪ್ರಾರಂಭಿಸಲು ಅನುಮತಿ ನೀಡುವಲ್ಲಿ ಸರ್ಕಾರ ಅನುಸರಿಸುತ್ತಿರುವ ಮಾನದಂಡವನ್ನು ತಿಳಿಸುವುದು;

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) 2008–09ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು 95 ಖಾಸಗಿ ಪದವಿ ಪರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ;

ಆ) ಸೊಸೈಟಿ/ಟ್ರಸ್ಟ್‌ಗಳ ಆಡಳಿತ ಮಂಡಳಿಯವರು ಪ್ರಸ್ತಾವನೆ ಸಲ್ಲಿಸಬೇಕಾಗಿರುತ್ತದೆ. ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಸುತ್ತಮುತ್ತಲಿನ ಪ್ರೌಢಶಾಲೆಗಳಲ್ಲಿನ 10ನೇ ತರಗತಿಯ ವಿದ್ಯಾರ್ಥಿಗಳ ಸಂಖ್ಯೆಯನ್ನು ಪರಿಗಣಿಸಲಾಗುವುದು. ಕರ್ನಾಟಕ ಪದವಿ ಪೂರ್ವ ಶಿಕ್ಷಣ (ಶೈಕ್ಷಣಿಕ, ಮಾನ್ಯತೆ, ಆಡಳಿತ ಮತ್ತು ಸಹಾಯಾನುದಾನ